**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.393/2022**

ಪಿರ್ಯಾದುದಾರರು ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

ಆರೋಪಿ/ತರು ಃ ಯತೀಶ್ ಕುಮಾರ್ ಬಿನ್ ಆಂಜನಪ್ಪ,
32 ವರ್ಷ, ಚಾಲಕ, ವಾಸಃವಿನಾಯಕ ನಗರ,
ಹೊಸದುರ್ಗ ತಾಃ ಚಿತ್ರದುರ್ಗ ಜಿಲ್ಲೆ

-ಃಆಪಾದನೆಃ-

ದಿನಾಂಕಃ 19.09.2021 ರಂದು ಸಂಜೆ 4-30 ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ಅಜ್ಜಂಪುರ - ತರೀಕೆರೆ ಮಾರ್ಗದ ಎಸ್ ಹೆಚ್ 24 ನಲ್ಲಿ ಸಂತೆ ದಿಬ್ಬದ ಕಡೆ ಎಂದಿರುವ ಬೋರ್ಡ್ ನಿಂದ ಮುಂದೆ ಟಾರು ರಸ್ತೆಯಲ್ಲಿ ಚಾಸಾ-1 ರವರ ತಂದೆ ಮಲ್ಲಪ್ಪ ಬಿ ಎಸ್ ರವರು ತಮ್ಮ ಬಾಬ್ತು ಕೆಎ -14/ಯು-5121 ಮೋಟಾರ್ ಬೈಕಿನಲ್ಲಿ ಬೆಟ್ಟದ ಹಳ್ಳಿ ಕಡೆಗೆ ಹೋಗುತ್ತಿದ್ದಾಗ ಎದುರುಗಡೆಯಿಂದ ಅಂದರೆ ಅಜ್ಜಂಪುರ ಕಡೆಯಿಂದ ಬಂದ ಆರೋಪಿಯಾದ ನೀವು ಕೆಎ-16/ಜಿ-0754 ಅಂಬುಲೆನ್ಸ್ ವಾಹನವನ್ನು ಅತಿವೇಗ, ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮಲ್ಲಪ್ಪರವರು ಚಾಲನೆ ಮಾಡುತ್ತಿದ್ದ ಬೈಕಿಗೆ ಡಿಕ್ಕಿಪಡಿಸಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ **279** ರೀತ್ಯಾ ಶಿಕ್ಷಾರ್ಹ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ಹೇಳಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿ ಅಪಘಾತಪಡಿಸಿದ ಪರಿಣಾಮ, ಮಲ್ಲಪ್ಪ ರವರ ಮೈಕೈಗೆ, ಪಕ್ಕೆಗೆ, ಹೊಟ್ಟೆಗೆ ಮತ್ತು ಕಾಲಿಗೆ ತೀವ್ರ ಸ್ವರೂಪದ ಗಾಯವಾಗಿದ್ದು, ಅವರನ್ನು ಉಡುಪಿಯ ಆದರ್ಶ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ದಾಖಲಿಸಿದ್ದು, ಆದರೆ ಚಿಕಿತ್ಸೆ ಫಲಕಾರಿಯಾಗದೇ ದಿಃ01.12.2021 ರಂದು ಮಲ್ಲಪ್ಪರವರು ಮೃತಪಡುವಂತೆ

ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ. **304(ಎ)** ರ ರೀತ್ಯಾ ಶಿಕ್ಷಾರ್ಹ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೂರನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಸದರಿ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಅಪಘಾತಪಡಿಸಿ ಗಾಯಾಳುವಿಗೆ ಚಿಕಿತ್ಸೆ ಕೊಡಿಸದೆ, ಪೊಲೀಸ್ ಠಾಣೆಗೆ ಮಾಹಿತಿ ನೀಡದೆ ಸ್ಥಳದಿಂದ ಪರಾರಿಯಾಗಿದ್ದು, ಆ ಮೂಲಕ ನೀವು ಭಾರತೀಯ ಮೋಟಾರ್ ವಾಹನ ಕಾಯ್ದೆಯ ಕಲಂ.**187** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

ಪ್ರಶ್ನೆ-1 ಈಗ ಓದಿ ಹೇಳಿದ ನಿಮ್ಮ ಮೇಲೆ ಮಾಡಿರುವ ಆರೋಪಗಳು ತಿಳಿಯಿತೆ?
ಉತ್ತರಃ Yes

ಪ್ರಶ್ನೆ-2ಃ ಸದರಿ ಆರೋಪಗಳನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಉತ್ತರಃ I have defense

(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿ ವಿವರಿಸಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಳ್ಳಲಾಗಿದೆ.)
ದಿನಾಂಕಃ 25.07.2023

Sd/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿ/ತರ ಸಹಿಃ